ಸಿಸಿ ನಂ. 191/2022 ಪಿಡಬ್ಲೂ :1

ದಿನಾಂಕಃ 05-06-2023 ರಂದು ಸಾಕ್ಷಿಯನ್ನು ಪುನಃ ಕರೆಸಿ ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆಃ ಪಿರ್ಯಾದುದಾರರ ಪರವಾಗಿಃ** ಅವರ **ವಕೀಲರಿಂದಃ**

ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತದೆ.

2. ಠರಾವಿನ ಯಥಾ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿಪಿ -1 ಎಂದು ಗುರುತಿಸಲಾಯಿತು. ಆರೋಪಿಯು ನೀಡಿದ ಚೆಕ್ ಹಾಜರು ಪಡಿಸಿದ್ದು ಅದನ್ನು ನಿಪಿ -2 ಎಂದು ಗುರುತಿಸಲಾಯಿತು. ನಿಪಿ-2 ರಲ್ಲಿರುವ ಸಹಿ ಆರೋಪಿಯ ಸಹಿಯಾಗಿರುತ್ತದೆ . ಸದರಿ ಸಹಿಯನ್ನು ನಿಪಿ-2 ಎ ಎಂದು ಗುರುತಿಸಲಾಯಿತು. ಬ್ಯಾಂಕನವರು ಕೊಟ್ಟಿರುವ ಮೆಮೊವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-3 ಎಂದು ಗುರುತಿಸಲಾಯಿತು. ನಾವು ನಮ್ಮ ವಕೀಲರ ಮುಖಾಂತರ ಆರೋಪಿಗೆ ನೀಡಿದ ನೋಟಿಸಿನ ಕಚೇರಿ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ -4 ಎಂದು, ಅಂಚೆ ರಸೀದಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ -5 ಎಂದು ಗುರುತಿಸಲಾಯಿತು. ಅಂಚೆ ಸ್ವೀಕೃತಿ ಪತ್ರವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-6 ಎಂದು ಗುರುತಿಸಲಾಯಿತು.

( ಮುಂದುವರೆದ ಮುಖ್ಯ ವಿಚಾರಣೆ ಕೋರಿಕೆಯ ಮೇರೆಗೆ ಮುಂದೂಡಲಾಯಿತು)

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಧಾನ ಪ್ರ.ದ.ನ್ಯಾದಂ., ಕುಮಟಾ.